1	2	3	4	5	6
7)	ಸಿಂಗಟಲೂರು	7.50	6.42	0.55	14.47
8)	ಭೀಮಾ ಏತ	1.99	2.29	0.86	5.14
9)	ಗಂಡೋರಿ ನಾಲಾ	8.16	23.67	3.31	35.14
10)	ತುಂಗಾ ಏತ	-	-	-	-
11)	ಕಳಸ ನಾಲಾ	-	-	-	-
12)	ಬಂದೂರಾ ನಾಲಾ	-	-	-	-
	ಒಟ್ಟು	173.16	246.62	86.84	506.62

ಇ) ಯಾವುದೂ ಇಲ್ಲ.

ಪಶ್ಚಿಮ ವಾಹಿನಿ ಯೋಜನೆ ಅನುಷ್ಠಾನ

2484 (3120) ಶ್ರೀ ಯೋಗೀಶ್ ಭಟ್ ಎನ್. (ಮಂಗಳೂರು) :— ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಪಶ್ಚಿಮವಾಹಿನಿ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಸರ್ಕಾರ ಯೋಚಿಸಿದೆಯೇ? ಇದಕ್ಕೆ ತಗಲುವ ವೆಚ್ಚ ಎಷ್ಟು? ಇದರಿಂದ ಕರಾವಳಿ ಜಿಲ್ಲೆಗಳಿಗೆ ಆಗುವ ಲಾಭ ಯಾವುದು.

ಆ) ಈ ಯೋಜನೆಯ ಅನುಷ್ಠಾನಕ್ಕೆ ಬೇಕಾಗುವ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸರ್ಕಾರ ಯಾವ ಕ್ರಮಕ್ಕೆಗೊಳ್ಳಲಾಗಿದೆ.

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :—

ಹೌದು, ಪರಿಶೀಲಿಸಲಾಗುತ್ತಿದೆ. ಈ ಯೋಜನೆಯಿಂದ ಕರಾವಳಿ ಜಿಲ್ಲೆಗಳ 39506.18 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಬಹುದಾಗಿದೆ. ಅಲ್ಲದೆ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸುವುದೊಂದಿಗೆ ಅಂತರ್ಜಲ ಮಟ್ಟ ಹೆಚ್ಚಿಸಬಹುದಾಗಿದೆ.

ಆ) ಹುಡ್ಕೋ ಸಂಸ್ಥೆಯಿಂದ ಧನ ಸಹಾಯ ಪಡೆಯುವ ನಿಟ್ಟಿನಲ್ಲಿ ಪ್ರಯತ್ನಿಸಲಾಗುತ್ತಿದೆ.